ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

---

**ಸಂಖ್ಯೆ : ವಾಇ : ಜಂ ನಿ : ಸುಮಪ : 2021–22** **ದಿನಾಂಕ : 10–08–2021**

# ಪತ್ರಿಕಾ ಪ್ರಕಟಣೆ

## PRESS RELEASE

## ಮುಖ್ಯಮಂತ್ರಿ ಬಸವರಾಜ ಎಸ್. ಬೊಮ್ಮಾಯಿ ಅವರ ಅಧ್ಯಕ್ಷತೆಯಲ್ಲಿ ಹಿರಿಯ ಪೊಲೀಸ್ ಅಧಿಕಾರಿಗಳ ಸಭೆಯ ಮುಖ್ಯಾಂಶಗಳು:

ಬೆಂಗಳೂರು, ಆಗಸ್ಟ್ 10 (ಕರ್ನಾಟಕ ವಾರ್ತೆ):

ರಾಜ್ಯದಲ್ಲಿ ಅತ್ಯುತ್ತಮ ಪೊಲೀಸ್ ಅಧಿಕಾರಿಗಳ ತಂಡ ಕಾರ್ಯನಿರ್ವಹಿಸುತ್ತಿದ್ದು, ಪೊಲೀಸರು ಜನರು ಶಾಂತಿ ನೆಮ್ಮದಿಯ ಜೀವನ ನಡೆಸುವ ವಾತಾವರಣ ಸೃಷ್ಟಿಸಬೇಕು ಎಂದು ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರು ತಿಳಿಸಿದರು.
ಅವರು ಇಂದು ರಾಜ್ಯದ ಹಿರಿಯ ಪೊಲೀಸ್ ಅಧಿಕಾರಿಗಳೊಂದಿಗೆ ಸಭೆ ನಡೆಸಿ ವಿವಿಧ ವಿಷಯಗಳ ಕುರಿತು ಚರ್ಚಿಸಿದರು.

ಸಭೆಯಲ್ಲಿ ಮುಖ್ಯಮಂತ್ರಿಗಳು ನೀಡಿದ ಸೂಚನೆಗಳ ಮುಖ್ಯಾಂಶಗಳು:

ಪೊಲೀಸ್ ಇಲಾಖೆಯಲ್ಲಿ ಹಲವು ಸುಧಾರಣೆಗಳು, ಮೂಲಸೌಕರ್ಯ ಅಭಿವೃದ್ಧಿಗೆ ಚಾಲನೆ ನೀಡಲಾಗಿತ್ತು. ಮುಂದಿನ ದಿನಗಳಲ್ಲಿ ಕೆಲವು ಸವಾಲುಗಳನ್ನು ಎದುರಿಸಬೇಕಾಗಿದೆ. ಕೋವಿಡ್ 19 ಸಂಭಾವ್ಯ ಮೂರನೇ ಅಲೆ ತಡೆಗಟ್ಟಲು ಕ್ರಮ ವಹಿಸಬೇಕು. ಗಡಿ ಜಿಲ್ಲೆಗಳಲ್ಲಿ ಹೆಚ್ಚು ಎಚ್ಚರಿಕೆ ವಹಿಸಬೇಕು. ಹಿರಿಯ ಅಧಿಕಾರಿಗಳು ಹೆಚ್ಚು ಜವಾಬ್ದಾರಿಯಿಂದ ಕಾರ್ಯನಿರ್ವಹಿಸಬೇಕು. ಗಡಿ ಚೆಕ್ ಪೋಸ್ಟ್ ಗಳ ತಪಾಸಣೆ ನಡೆಸಬೇಕು.

ಅಪರಾಧ ಪ್ರಕರಣಗಳನ್ನು ಹತೋಟಿಗೆ ತರಬೇಕು. ಅಪರಾಧ ವೈರಸ್ ಇದ್ದ ಹಾಗೆ. ಇದನ್ನು ಸಶಕ್ತವಾಗಿ ಸದೆಬಡಿಯಬೇಕು. ಆಗ ಹತೋಟಿಯಲ್ಲಿರುತ್ತದೆ. ಸಮಾಜದಲ್ಲಿ ಜೂಜು, ಡಾರ್ಕ್ ವೆಬ್ ಮತ್ತಿತರ ಕಾನೂನು ಬಾಹಿರ ಚಟುವಟಿಕೆಗಳನ್ನು ನಿಯಂತ್ರಿಸಬೇಕು. ಇದರಲ್ಲಿ ಯಾವುದೇ ರಾಜಿ ಮಾಡಿಕೊಳ್ಳುವಂತಿಲ್ಲ , ಅಪರಾಧವನ್ನು ಸಹಿಸಿಕೊಳ್ಳಲು ಸಾಧ್ಯವಿಲ್ಲ ಎಂದು ತಿಳಿಸಿದರು.

ಕಾನೂನು, ಸುವ್ಯವಸ್ಥೆ ಕಾಪಾಡುವುದು ಸರ್ಕಾರದ ಪ್ರಥಮ ಆದ್ಯತೆ. ಭೂವಿವಾದದ ಹಿನ್ನೆಲೆಯಲ್ಲಿ ಸಂಭವಿಸುವ ಅಪರಾಧ ಪ್ರಕರಣಗಳನ್ನು ತಡೆಗಟ್ಟಬೇಕು. ಮಾದಕ ವಸ್ತುಗಳ ವಿರುದ್ಧದ ಹೋರಾಟ ಮುಂದುವರೆಯಲಿದೆ. ಎಲ್ಲ ಜಿಲ್ಲೆಗಳಲ್ಲಿ ಈ ಕುರಿತು ಕಟ್ಟುನಿಟ್ಟಿನ ಕ್ರಮಗಳನ್ನು ತೆಗೆದುಕೊಳ್ಳಬೇಕು. ಆಂತರಿಕ ಭದ್ರತಾ ವಿಭಾಗವನ್ನು ಬಲಪಡಿಸಬೇಕು. ಕೈದಿಗಳ ಆದಾಯ ಹೆಚ್ಚಳಕ್ಕೆ ಕ್ರಮ ಕೈಗೊಳ್ಳಬೇಕು. ಪೊಲೀಸ್ ವ್ಯವಸ್ಥೆ ಜನಸ್ನೇಹಿಯಾಗಬೇಕು ಎಂದರು.

ಗೃಹ ಸಚಿವ ಆರಗ ಜ್ಞಾನೇಂದ್ರ ಅವರು ಮಾತನಾಡಿ,ಇಲಾಖೆಯ ಸುಧಾರಣೆ ಮತ್ತು ಅತ್ಯುತ್ತಮ ಕಾರ್ಯ ನಿರ್ವಹಣೆಗೆ ಬೆಂಬಲ ನೀಡುವಂತೆ ಮುಖ್ಯಮಂತ್ರಿಗಳನ್ನು ಕೋರಿದರು. ಇಲಾಖೆಯು ಅಪರಾಧ ಪ್ರಕರಣಗಳ ಶೀಘ್ರ ತನಿಖೆಗೆ ಆದ್ಯತೆ ನೀಡಬೇಕು. ಇದರಲ್ಲಿ ವಿಳಂಬ ಧೋರಣೆ ಸಲ್ಲದು ಎಂದರು.
ಸಭೆಯಲ್ಲಿ ಸರ್ಕಾರದ ಮುಖ್ಯ ಕಾರ್ಯದರ್ಶಿ ಪಿ. ರವಿಕುಮಾರ್, ಒಳಾಡಳಿತ ಇಲಾಖೆ ಅಪರ ಮುಖ್ಯ ಕಾರ್ಯದರ್ಶಿ ರಜನೀಶ್ ಗೋಯಲ್, ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿ ಎನ್. ಮಂಜುನಾಥ ಪ್ರಸಾದ್, ಪೊಲೀಸ್ ಮಹಾನಿರ್ದೇಶಕ ಪ್ರವೀಣ್ ಸೂದ್ ಮತ್ತು ಇಲಾಖೆಯ ಹಿರಿಯ ಅಧಿಕಾರಿಗಳು ಭಾಗವಹಿಸಿದ್ದರು.

## Highlights of the Meeting held with Senior Police Officers under the chairmanship of Chief Minister Basavaraj Bommai

Bengaluru, August 10 (Karnataka Information):

The State has the best team of police officers and they have to create a peaceful environment , said Chief Minister Basavaraj Bommai.
He was speaking at the senior police officers meeting held today and discussed various issues.
Highlights of the instructions given by the Chief Minister in the meeting:

Various programmes were initiated in the police department regarding advancement and improving basic facilities. Many challenges needs to be faced in the future.
Action has to be taken to prevent the possible Covid 3rd wave. Precautions have to be taken at the border districts. Senior officers will have to work more responsibly. Inspection at the check posts in borders will be mandatory.

Crime rate to be brought under control. Crimes are like virus. It has to be curtailed very strongly. Only then will it be under control. Gambling, dark web and other illegal activities must be controlled without making any compromises, the CM gave strict instructions.

He said that crimes cannot be tolerated. Maintaining Law and Order is our first priority. Crimes related to land disputes must be prevented.

Our fight against narcotics and drugs will continue. Strict action to be taken in all districts regarding the matter Internal security division should be strengthened.
Action to be taken to increase the income of prisoners ,Police force must be people friendly.

Araga Jnanendra, Home Minister, who spoke on the occasion requested the CM to provide support for improvising and better functioning of police department. The department must give priority to investigate the crime cases speedily. He said that delay in these cases will not be tolerated.

P.Ravikumar, Chief Secretary, Rajaneesh Goel, ACS to Home Department, N.Manjunath Prasad, Principle Secretary to Chief Minister. Praveen Sood, DG& IGP and other senior officials were present.

## ಡಿ.ಎಸ್.ಟಿ – ಪಿಹೆಚ್.ಡಿ ಶಿಷ್ಯವೇತನ ಯೋಜನೆಯಡಿ ಶಿಷ್ಯವೇತನ ಪಡೆಯಲು ಅರ್ಜಿ ಆಹ್ವಾನ

ಬೆಂಗಳೂರು, ಆಗಸ್ಟ್ 10 (ಕರ್ನಾಟಕ ವಾರ್ತೆ):

ಕರ್ನಾಟಕ ಸರ್ಕಾರದ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯು 2021–22ನೇ ಸಾಲಿನಲ್ಲಿ ವಿಜ್ಞಾನ ಮತ್ತು ಇಂಜಿನಿಯರಿಂಗ್‌ನಲ್ಲಿ ಪಿಹೆಚ್.ಡಿ ಸಂಶೋಧನೆಗೆ ಸಂಬಂಧಿಸಿದಂತೆ ಕರ್ನಾಟಕ ಡಿ.ಎಸ್.ಟಿ – ಪಿಹೆಚ್.ಡಿ ಶಿಷ್ಯವೇತನ ಯೋಜನೆಯಡಿ ಶಿಷ್ಯವೇತನ ಪಡೆಯಲು ವಿಜ್ಞಾನ ಮತ್ತು ಇಂಜಿನಿಯರಿಂಗ್ ವಿಷಯಗಳಲ್ಲಿ ಕರ್ನಾಟಕದಲ್ಲಿರುವ ಮಾನ್ಯತೆ ಪಡೆದ ವಿಶ್ವವಿದ್ಯಾಲಯ/ ಸಂಸ್ಥೆ/ಕಾಲೇಜುಗಳಲ್ಲಿ ಈಗಾಗಲೇ ಪಿಹೆಚ್.ಡಿ ಪದವಿಗೆ ನೋದಾಯಿತರಾಗಿರುವ ಅರ್ಹ ಸಂಶೋಧನಾ ವಿದ್ಯಾರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಕರ್ನಾಟಕ ಸರ್ಕಾರದ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯು ( ಡಿ.ಎಸ್.ಟಿ) ವಿಜ್ಞಾನ ಮತ್ತು ಇಂಜಿನಿಯರಿಂಗ್‌ನಲ್ಲಿ ಪಿಹೆಚ್.ಡಿ ಸಂಶೋಧನೆಗೆ ಕರ್ನಾಟಕ ಡಿ.ಎಸ್.ಟಿ – ಪಿಹೆಚ್.ಡಿ ಶಿಷ್ಯವೇತನ ಎಂಬ ಕಾರ್ಯಕ್ರಮವನ್ನು ಇಲಾಖೆಯ ಸ್ವಾಯತ್ತ ಸಂಸ್ಥೆಯಾದ ಕರ್ನಾಟಕ ಮತ್ತು ತಂತ್ರಜ್ಞಾನ ಪ್ರೋತ್ಸಾಹಕ ಸೊಸೈಟಿಯ ಮುಖಾಂತರ ಅನುಷ್ಠಾನಗೊಳಿಸುತ್ತಿದೆ.

ಅರ್ಹ ಸಂಶೋಧನಾ ವಿದ್ಯಾರ್ಥಿಗಳು ಆನ್‌ಲೈನ್ ಮೂಲಕ ಅರ್ಜಿಯನ್ನು ಸೆಪ್ಟೆಂಬರ್ 06 ಸಂಜೆ 5.00 ಗಂಟೆಯೊಳಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ವೆಬ್‌ಸೈಟ್ ವಿಳಾಸ: http://ksteps.karnataka.gov.in ನ್ನು ಸಂಪರ್ಕಿಸಬಹುದಾಗಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಗುಣಮಟ್ಟವಲ್ಲದ ಔಷಧಿಗಳ ಬಳಕೆ ನಿಷೇಧ

ಬೆಂಗಳೂರು, ಆಗಸ್ಟ್ 10 (ಕರ್ನಾಟಕ ವಾರ್ತೆ):

ರಾಜ್ಯ ಔಷಧ ಪರೀಕ್ಷಾ ಪ್ರಯೋಗಾಲಯದ ಸರ್ಕಾರಿ ವಿಶ್ಲೇಷಕರು, ಜಿಬಿಎಸ್ ಟಚ್ ಆಂಟಿಅಫ್ಟಿಕ್ ಹ್ಯಾಂಡ್ ಸ್ಯಾನಿಟೈಸರ್ IPA0420A02 D/M: 04/2020 D/E:03/2022, ಪರರಪೋರ್ಟೆಡ್ ಟು ಬಿ ಹ್ಯಾಂಡ್ ಸ್ಯಾನಿಟೈಸರ್ D/M: D/E:, ಗ್ಲೈಸೆರೋಲ್ ಓರಲ್ Mc015 D/M: 12/2020 D/E:Use before 2 Years, ಪ್ಲಾಂಟಾಪ್-ಎಸ್‌ಆರ್ (ಅಸೆಕ್ಲೋಫೆನಕ್ ಸಸ್ಟೈನಡ್ ರಿಲೀಸ್ ಟ್ಯಾಬ್ಲೆಟ್ಸ್) G/90451, D/M: Oct/2019 D/E:Sep/2021, ಕೋನಾನ್-ಐಟಿ 200 ಕ್ಯಾಪ್ಸೂಲ್ಸ್) CITB9006A D/M: Sep /2019 D/E:Aug/2021, ಟೆಲ್‌ಮಿಸರ್ಟನ್ & ಅಮ್ಲೋಡಿಪೈನ್ ಟ್ಯಾಬ್ಲೆಟ್ಸ್ ಐಪಿ (ಟೆಲ್‌ಬಿನಡ್-ಎಎಮ್) DET-08904 D/M: 10/2020 D/E:09/2022, (ಡೈಕ್ಲೋಫೆನಕ್ ಪೋಟ್ಯಾಷಿಯಂ & ಪ್ಯಾರಸೆಟಮೋಲ್ ಟ್ಯಾಬ್ಲೆಟ್ಸ್) ಮೋನೋಜೋಕ್ಸ್ ಟ್ಯಾಬ್ಲೆಟ್ಸ್ MS20032 D/M: Aug/2020 D/E:Jul/2023, ಗ್ಲಿಂಪ್ ಎಂ1 ಎಸ್‌ಆರ್ (ಮೆಟಪಾರ್ಮಿನ್ ಹೈಡ್ರೋಕ್ಲೋರೈಡ್ ಪ್ರೋಲಾಂಗಡ್- ರಿಲೀಸ್ & ಗ್ಲಿಮಿಫಿರೈಡ್ ಟ್ಯಾಬ್ಲೆಟ್ಸ್ ಐ.ಪಿ) ZD20584 D/M: 05/2020 D/E:04/2022 ಈ ಔಷಧಿಗಳನ್ನು ಕಾಂತಿವರ್ಧಕ ಔಷಧ ವ್ಯಾಪಾರಿಗಳು, ಸಗಟು ಔಷಧ ಮಾರಾಟಗಾರರು, ವೈದ್ಯರು, ಆಸ್ಪತ್ರೆ, ಮತ್ತು ನರ್ಸಿಂಗ್ ಹೋಂನವರು ದಾಸ್ತಾನು ಮಾಡುವುದಾಗಲೀ, ಮಾರಾಟ ಮಾಡುವುದಾಗಲೀ ಹಾಗೂ ಇವುಗಳನ್ನು ಉಪಯೋಗ ಮಾಡಬಾರದು. ಯಾರಾದರೂ ಔಷಧಗಳನ್ನು ದಾಸ್ತಾನು ಹೊಂದಿದ್ದಲ್ಲಿ ಕೂಡಲೇ ಸಂಬಂಧಪಟ್ಟ ಕ್ಷೇತ್ರದ ಪರಿವೀಕ್ಷಕರು ಅಥವಾ ಸಹಾಯಕ ಔಷಧ ನಿಯಂತ್ರಕರ ಗಮನಕ್ಕೆ ತರಬೇಕೆಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಗೃಹರಕ್ಷಕ ದಳ ಕೇಂದ್ರ ಕಚೇರಿಯಲ್ಲಿ ವನ ಮಹೋತ್ಸವ ಸಮಾರಂಭ

ಬೆಂಗಳೂರು, ಆಗಸ್ಟ್ 10 (ಕರ್ನಾಟಕ ವಾರ್ತೆ):

ಗೃಹರಕ್ಷಕ ದಳ ಕೇಂದ್ರ ಕಚೇರಿಯಲ್ಲಿ 09.08.2021 ರಂದು ಪೀಣ್ಯ ಘಟಕ ಗೃಹರಕ್ಷಕದಳ ಬೆಂಗಳೂರು ಉತ್ತರ ಜಿಲ್ಲೆ ವತಿಯಿಂದ ವನ ಮಹೋತ್ಸವ ಸಮಾರಂಭವನ್ನು ಆಯೋಜಿಸಲಾಗಿತ್ತು. ESIC ಆಸ್ಪತ್ರೆ ಪೀಣ್ಯ ಹಾಗೂ ಇತರೆ ಸರ್ಕಾರಿ ಸ್ಥಳಗಳಲ್ಲಿ ಗಿಡಗಳನ್ನು ನೆಡಲಾಯಿತು.

ESIC ಆಸ್ಪತ್ರೆ ಪೀಣ್ಯ ವೈದ್ಯಕೀಯ ಮುಖ್ಯಸ್ಥರು ಡಾ. ವೀಣಾ ಕುಮಾರಿ ಮೇಡಂ, ಮತ್ತು 2IC ಬೆಂಗಳೂರು ಉತ್ತರ ಜಿಲ್ಲೆ ಗುರುನಾಥ್ ರೆಡ್ಡಿ ಜಿಲ್ಲಾ ಕಛೇರಿಯ ಭೋಧಕರು, ಸ್ಟಾಫ್ ಆಫೀಸರ್, ಬಿ.ಇ.ಎಲ್,ಸಿ, ಯಲಹಂಕ, ರಾಜರಾಜೇಶ್ವರಿನಗರ, ಘಟಕಾಧಿಕಾರಿಗಳು ಮತ್ತು ಪ್ಲಟೂನ್ ಕಮಾಂಡರ್, ಪೀಣ್ಯ ಘಟಕಾಧಿಕಾರಿ, ಮಹೇಶ್ ಎಂ ಹಾಗೂ ಸಹಾಯಕ ಘಟಕಾಧಿಕಾರಿ, ಲೋಕಮ್ಮ ಹಾಗೂ ಘಟಕದ ಗೃಹರಕ್ಷಕ/ರಕ್ಷಕಿಯರು ಉಪಸ್ಥಿತಿಯಲ್ಲಿ ನೆರವೇರಿಸಲಾಯಿತು.

## ಹೊಸ ರೂಪದ ಕನ್ನಡ ಪುಸ್ತಕ ನೀತಿ ರಚನೆಗೆ ಸಮಿತಿ ನೇಮಕ - ಡಾ. ಎಂ.ಎನ್.ನಂದೀಶ್ ಹಂಚೆ

ಬೆಂಗಳೂರು, ಆಗಸ್ಟ್ 10 (ಕರ್ನಾಟಕ ವಾರ್ತೆ):

ಕನ್ನಡ ಪುಸ್ತಕೋದ್ಯಮದ ಸಮಗ್ರ ಅಭಿವೃದ್ಧಿಗಾಗಿ ಆಧುನಿಕ ಮಾಧ್ಯಮಗಳ ಸವಾಲುಗಳನ್ನು ಒಳಗೊಂಡ ಹೊಸ ಪುಸ್ತಕ ನೀತಿ ರಚನೆಗೆ ನೂತನ ಸಮಿತಿಯೊಂದನ್ನು ರಚನೆ ಮಾಡಲಾಗುತ್ತಿದೆ ಎಂದು ಕನ್ನಡ ಪುಸ್ತಕ ಪ್ರಾಧಿಕಾರದ ಅಧ್ಯಕ್ಷ ಡಾ. ಎಂ.ಎನ್. ನಂದೀಶ್ ಹಂಚೆ ಹೇಳಿದ್ದಾರೆ.

ಅವರು ಇಂದು ಕನ್ನಡ ಪುಸ್ತಕ ನೀತಿ ಕರಡು ರಚನೆಗಾಗಿ ರೂಪಿಸಲಾದ ಸಮಿತಿ ಸದಸ್ಯರ ಪ್ರಾಥಮಿಕ ಹಂತದ ಸಭೆಯನ್ನು ಉದ್ದೇಶಿಸಿ ಕನ್ನಡ ಪುಸ್ತಕೋದ್ಯಮ ಇಂದು ಸಂಕ್ರಮಣದ ಕಾಲಘಟ್ಟದಲ್ಲಿದೆ. ಈ-ಬುಕ್, ಆಡಿಯೋ ಬುಕ್, ಅಂತರ್ಜಾಲ ಪುಸ್ತಕ ಪ್ರಕಟಣೆ ಮುಂತಾದವು ಕನ್ನಡ ಪುಸ್ತಕೋದ್ಯಮವನ್ನು ಕಾಗದರಹಿತವನ್ನಾಗಿ ಮಾಡಿದೆ. ಅದು ಪುಸ್ತಕೋದ್ಯಮದ ಅನಿವಾರ್ಯ ರೂಪವಾಗಿ ಪರಿವರ್ತನೆಯಾಗುತ್ತಿರುವ ಸಂದರ್ಭದಲ್ಲಿ

ಕನ್ನಡ ಪುಸ್ತಕೋದ್ಯಮ ಅದನ್ನೂ ಒಳಗೊಂಡಂತೆ ಬೆಳೆಯಬೇಕಾಗಿರುವ ಅನಿವಾರ್ಯತೆ ಇದೆ. ಹಾಗಾಗಿ ಈ ಹಿಂದೆ ಡಾ. ಸಿದ್ಧಲಿಂಗಯ್ಯ ಅವರ ಅಧ್ಯಕ್ಷತೆಯಲ್ಲಿ ರೂಪುಗೊಂಡಿದ್ದ, ಕನ್ನಡ ಪುಸ್ತಕ ನೀತಿಯನ್ನು ಹೊಸ ದೃಷ್ಟಿಕೋನದಿಂದ ನೋಡುವ ಅವಶ್ಯಕತೆ ಇದೆ ಎಂದರು. ಈ ಹಿನ್ನೆಲೆಯಲ್ಲಿ ಆಧುನಿಕ ಮಾಧ್ಯಮಗಳ ಸವಾಲುಗಳ ಸಹಿತ ಕನ್ನಡ ಪುಸ್ತಕೋದ್ಯಮದ ಸಮಗ್ರ ಬೆಳವಣಿಗೆಯನ್ನು ದೃಷ್ಟಿಯಲ್ಲಿಟ್ಟುಕೊಂಡು ಹೊಸ ರೂಪದ ಕನ್ನಡ ಪುಸ್ತಕ ನೀತಿ ರಚನೆಗೆ ಕನ್ನಡ ಪುಸ್ತಕ ಪ್ರಾಧಿಕಾರ ಮುಂದಾಗಿದೆ. ಇದರ ಮುಖ್ಯ ಸಲಹೆಗಾರರಾಗಿ ಖ್ಯಾತ ವಿಮರ್ಶಕ ಡಾ. ನರಹಳ್ಳಿ ಬಾಲಸುಬ್ರಹ್ಮಣ್ಯ ಕೆಲಸ ಮಾಡಲಿದ್ದಾರೆ. ಇವರ ಜೊತೆ ಖ್ಯಾತ ಸಾಹಿತಿ ವಸುಧೇಂದ್ರ ಸಹ ಸಮಿತಿಯಲ್ಲಿರುತ್ತಾರೆ. ಪ್ರಾಥಮಿಕ ಹಂತದಲ್ಲಿ ಕನ್ನಡ ಪ್ರಕಾಶಕರ ಸಂಘದ ಅಧ್ಯಕ್ಷರಾದ ಪ್ರಕಾಶ ಕಂಬತ್ತಳ್ಳಿ, ಕಾರ್ಯದರ್ಶಿಗಳಾದ ನ. ರವಿಕುಮಾರ, ಕರ್ನಾಟಕ ಬರಹಗಾರರು ಮತ್ತು ಲೇಖಕರ ಸಂಘದ ಅಧ್ಯಕ್ಷರಾದ ನಿಡಸಾಲೆ ಪುಟ್ಟಸ್ವಾಮಯ್ಯ, ಕುವೆಂಪು ಭಾಷಾ ಭಾರತಿ ಪ್ರಾಧಿಕಾರದ ಅಧ್ಯಕ್ಷರಾದ ಅಜಕ್ಕಳ ಗಿರೀಶ್ ಭಟ್, ಸಾರ್ವಜನಿಕ ಗ್ರಂಥಾಲಯ ಇಲಾಖೆಯ ನಿರ್ದೇಶಕರಾದ ಡಾ. ಸತೀಶಕುಮಾರ ಎಸ್. ಹೊಸಮನಿ, ಮೈಸೂರು ವಿಶ್ವವಿದ್ಯಾಲಯದ ನಿರ್ದೇಶಕರಾದ ಶ್ರೀಮತಿ ವಿಜಯಕುಮಾರಿ ಕರೀಕಲ್ಲು, ಹಂಪಿ ವಿಶ್ವವಿದ್ಯಾಲಯದ ನಿರ್ದೇಶಕರಾದ ಡಾ. ಹೆಚ್.ಡಿ. ಪ್ರಶಾಂತ, ವೈ.ಜಿ. ಮುರಳೀಧರನ್, ಕಾನೂನು ಇಲಾಖೆಯಿಂದ ಕಾರ್ಯಶಿಗಳ ಪರವಾಗಿ ಎಸ್. ಅರುಣ್, ಇ-ಆಡಳಿತ (ಕೇಂದ್ರ) ವಿಭಾಗದ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳ ಪರವಾಗಿ ಶ್ರೀಮತಿ ಪುಷ್ಪ ಎಂ, ಕನ್ನಡ ಸಾಹಿತ್ಯ ಪರಿಷತ್ತಿನ ಪರವಾಗಿ ಕೆ.ರಾಜಕುಮಾರ್ ಹಾಗೂ ಕನ್ನಡ ಪುಸ್ತಕ ಪ್ರಾಧಿಕಾರದ ಆಡಳಿತಾಧಿಕಾರಿ ಕೆ.ಬಿ. ಕಿರಣ್ ಸಿಂಗ್ ಮತ್ತು ಸಹಾಯಕ ನಿರ್ದೇಶಕರಾದ ಶ್ರೀಮತಿ ಸೌಭಾಗ್ಯ ಅವರು ಭಾಗಹಿಸಿದ್ದರು.

ಸಭೆಯಲ್ಲಿ ಪುಸ್ತಕ ನೀತಿಯ ಬಗ್ಗೆ ವಿಸ್ತೃತ ಚರ್ಚೆ ನಡೆಯಿತು. ಎಲ್ಲರ ಅಭಿಪ್ರಾಯ ಸಂಗ್ರಹಿಸಿ ಶೀಘ್ರದಲ್ಲೇ ಮತ್ತೊಂದು ಪೂರ್ಣ ಪ್ರಮಾಣದ ಸಮಿತಿ ರಚನೆ ಮಾಡಿ ಕನ್ನಡ ಪುಸ್ತಕ ನೀತಿ ರಚನೆಗೆ ಕ್ರಮಕೈಗೊಳ್ಳಲಾಗುತ್ತದೆ ಎಂದು ಡಾ. ಎಂ.ಎನ್. ನಂದೀಶ್ ಹಂಚೆ ತಿಳಿಸಿದರು.

## Celebration of World Elephant Day on 12th August 2021 at Mysuru Zoo

Bengaluru, August 10 (Karnataka Information):

World Elephant Day is observed every year on August 12th to honor elephants and to spread awareness about the critical threats they are facing and to share knowledge regarding positive management of captive and wild elephants.

In this context, Mysuru zoo is celebrating World Elephant day on 12th August 2021.We are displaying attractive Information Boards and facts Boards about the Elephants in front of the Elephant enclosure at Mysuru Zoo from 10:30 A.M. to 5:30 P.M. General public are requested to avail this opportunity while visiting the Zoo. In this regard Online Quiz competition has been organized for students of age group between 12 to 18 years at 2:30 pm. Please go through the following link for enrollment https://forms.gle/JEDKecEpJuafBEEZ7 before 12/8/2021.

Following COVID-19 protocol is compulsory. For any queries contact 9686668099 / 0821-2440752.

# ಬೆಂಗಳೂರು ಜಲಮಂಡಳಿ ನೀರಿನ ಅದಾಲತ್

ಬೆಂಗಳೂರು, ಆಗಸ್ಟ್ 10 (ಕರ್ನಾಟಕ ವಾರ್ತೆ):

ಬೆಂಗಳೂರು ಜಲಮಂಡಳಿಯ ವತಿಯಿಂದ ಆಗಸ್ಟ್ 12 ರಂದು (ಪೂರ್ವ)–2–3, (ಪೂರ್ವ)–1–2, (ದಕ್ಷಿಣ–2), (ಆಗ್ನೇಯ–4), (ಪಶ್ಚಿಮ–2), (ನೈರುತ್ಯ–2), (ಆಗ್ನೇಯ–2), (ವಾಯುವ್ಯ–3), (ಕೇಂದ್ರ–2), (ಉತ್ತರ–2), (ಈಶಾನ್ಯ–1) ಮತ್ತು (ಉತ್ತರ ವಿಲೇಜ್–1) ಉಪವಿಭಾಗಗಳಲ್ಲಿ ನೀರಿನ ಬಿಲ್ಲು, ನೀರು ಮತ್ತು ಒಳಚರಂಡಿ ಸಂಪರ್ಕ ಕಲ್ಪಿಸುವಲ್ಲಿನ ವಿಳಂಬ, ಗೃಹ ಬಳಕೆಯಿಂದ ಗೃಹೇತರ ಬಳಕೆ ಪರಿವರ್ತನೆ ವಿಳಂಬ ಮತ್ತಿತರ ಕುಂದುಕೊರತೆಗಳಿಗೆ ಸಂಬಂಧಿಸಿದ ಸಮಸ್ಯೆಗಳನ್ನು ಪರಿಹರಿಸಲು ನೀರಿನ ಅದಾಲತ್‌ಅನ್ನು ಬೆಳಿಗ್ಗೆ 9.30 ರಿಂದ 11:00 ಗಂಟೆಯವರೆಗೆ ನಡೆಸಲಾಗುವುದು ಎಂದು ಬೆಂಗಳೂರು ಜಲಮಂಡಳಿಯ ಸಾರ್ವಜನಿಕ ಸಂಪರ್ಕಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಅದಾಲತ್ ನಡೆಯುವ ಸ್ಥಳಗಳು ಉಪವಿಭಾಗ (ಪೂರ್ವ)–2–3, 1ನೇ ಮುಖ್ಯ ರಸ್ತೆ, ಕಸ್ತೂರಿನಗರ, ಬೆಂಗಳೂರು–43. ಸೇವಾಠಾಣೆಗಳು ಬಾಣಸವಾಡಿ, ಓ.ಎಂ.ಬಿ.ಆರ್,ಲಿಂಗರಾಜಪುರಂ, ಕಸ್ತೂರಿನಗರ, ದೂರವಾಣಿ ಸಂಖ್ಯೆ: 9845444058, ಉಪವಿಭಾಗ (ಪೂರ್ವ)–1–2, ಎ. ನಾರಾಯಣಪುರ ಮುಖ್ಯ ರಸ್ತೆ, ಕೆ.ಆರ್.ಪುರಂ ರೈಲ್ವೇ ನಿಲ್ದಾಣದ ಎದುರು, ಪಟಾಲಮ್ಮ ದೇವಸ್ಥಾನದ ಹತ್ತಿರ, ಹನುಮಾನ್ ಜಂಕ್ಷನ್, ಎ.ನಾರಾಯಣಪುರ, ಬೆಂಗಳೂರು–16, ಸೇವಾಠಾಣೆಗಳು ಎ.ನಾರಾಯಣಪುರ, ದೊಡ್ಡನಕುಂದಿ, ವಿಜ್ಞಾನ ನಗರ, ದೂರವಾಣಿ ಸಂಖ್ಯೆ 9740984162, ಉಪವಿಭಾಗ (ದಕ್ಷಿಣ–2) ವಾಟರ್ ಟ್ಯಾಂಕ್ ಹತ್ತಿರ, 100 ಅಡಿ ರಸ್ತೆ, ಬಿ.ಟಿ.ಎಂ 2ನೇ ಹಂತ, ಬೆಂಗಳೂರು–76, ಸೇವಾಠಾಣೆಗಳು ಹೆಚ್.ಎಸ್.ಆರ್–1, ಕೋಡಿಚಿಕ್ಕನಹಳ್ಳಿ, ಬೊಮ್ಮನಹಳ್ಳಿ, ದೂರವಾಣಿ ಸಂಖ್ಯೆ 40977432, ಉಪವಿಭಾಗ ( ಆಗ್ನೇಯ–4) 2ನೇ ಅಡ್ಡರಸ್ತೆ, 17ನೇ ಮುಖ್ಯರಸ್ತೆ, ಕೋರಮಂಗಲ 3ನೇ ಬ್ಲಾಕ್, ಬೆಂಗಳೂರು–34, ಸೇವಾಠಾಣೆಗಳು ಕೋರಮಂಗಲ–1&2, ಬೆಳ್ಳಂದೂರು, ದೂರವಾಣಿ ಸಂಖ್ಯೆ 9591988970, ಉಪವಿಭಾಗ (ಪಶ್ಚಿಮ–2) 5ನೇ ಹಂತ, 1ನೇ ಮುಖ್ಯರಸ್ತೆ, ಬಿ.ಇ.ಎಂ.ಎಲ್. ಲೇಔಟ್, ರಾಜರಾಜೇಶ್ವರಿ ನಗರ,ಬೆಂಗಳೂರು–98 ಸೇವಾಠಾಣೆಗಳು ಕೆಂಗೇರಿ, ಐಡಿಯಲ್ ಹೋಮ್ಸ್, ಬಿ.ಇ.ಎಂ.ಎಲ್ ಲೇಔಟ್, ಆರ್.ಆರ್.ನಗರ, ದೂರವಾಣಿ ಸಂಖ್ಯೆ28611826, ಉಪವಿಭಾಗ (ನೈರುತ್ಯ–2) ನೆಲಮಹಡಿ, 1ನೇ ಮುಖ್ಯ ರಸ್ತೆ, ಬನಶಂಕರಿ 3ನೇ ಹಂತ, ಬನಗಿರಿನಗರ, ಬೆಂಗಳೂರು.–85
ಸೇವಾಠಾಣೆಗಳು ಕತ್ರಿಗುಪ್ಪೆ, ಹೊಸಕೆರೆಹಳ್ಳಿ, ದೇವಗಿರಿ–1, ಇಟ್ಟಮಡು, ಬನಗಿರಿನಗರ ದೂರವಾಣಿ ಸಂಖ್ಯೆ 22945144, ಉಪವಿಭಾಗ ಆಗ್ನೇಯ–2) 10ನೇ ಮುಖ್ಯ ರಸ್ತೆ, 7ನೇ ಅಡ್ಡ ರಸ್ತೆ, ಇಂದಿರಾನಗರ ಕ್ಲಬ್ ಹಿಂಭಾಗ, ಹೆಚ್.ಎ.ಎಲ್ 2ನೇ ಹಂತ, ಬೆಂಗಳೂರು. ಸೇವಾಠಾಣೆಗಳು ಜೀವನ್ ಭೀಮಾನಗರ, ಹೆಚ್.ಎ.ಎಲ್ 2ನೇ ಹಂತ, ಇಂದಿರಾನಗರ, ಬೈಯ್ಯಪ್ಪನಹಳ್ಳಿ, ಸಿ.ವಿ.ರಾಮನ್‌ನಗರ, ಸದಾನಂದನಗರ, ದೂರವಾಣಿ ಸಂಖ್ಯೆ 9845444070, ಉಪವಿಭಾಗ (ವಾಯುವ್ಯ–3) 5ನೇ ಬ್ಲಾಕ್, ಹೊರವರ್ತುಲ ರಸ್ತೆ, ನಾಗರಬಾವಿ, ಬೆಂಗಳೂರು. ಸೇವಾಠಾಣೆಗಳು ನಾಗರಬಾವಿ, ಅನ್ನಪೂರ್ಣೇಶ್ವರಿನಗರ, ಸರ್.ಎಂ.ವಿ ಲೇಔಟ್, ಮೂಡಲಪಾಳ್ಯ, ದೂರವಾಣಿ ಸಂಖ್ಯೆ 23212181, ಉಪವಿಭಾಗ (ಕೇಂದ್ರ–2) ಮಿಲ್ಲರ್ಸ್ ರಸ್ತೆ, ಹೈಗ್ರೌಂಡ್ಸ್, ಬೆಂಗಳೂರು–52, ಸೇವಾಠಾಣೆಗಳು ಹೈಗ್ರೌಂಡ್ಸ್, (ಹೆಚ್.ಜಿ.ಆರ್), ಕೋಲ್ಸ್ ಪಾರ್ಕ್, ಮಿಲ್ಲರ್ಸ್ ರಸ್ತೆ, ದೂರವಾಣಿ ಸಂಖ್ಯೆ 22945191, ಉಪವಿಭಾಗ (ಉತ್ತರ–2) 1ನೇ ಮಹಡಿ, ಪಿನಾಕಿನಿ ಭವನ, ದೊಡ್ಡಬಳ್ಳಾಪುರ ಮುಖ್ಯ ರಸ್ತೆ, ಯಲಹಂಕ ನ್ಯೂ ಟೌನ್, ಬೆಂಗಳೂರು–64 ಸೇವಾಠಾಣೆಗಳು ಯಲಹಂಕ ಓಲ್ಡ್ ಟೌನ್, ಯಲಹಂಕ ನ್ಯೂಟೌನ್, ಅಟ್ಟೂರು ದೂರವಾಣಿ ಸಂಖ್ಯೆ 9740984163, ಉಪವಿಭಾಗ (ಈಶಾನ್ಯ–1) ಕೊಠಡಿ ಸಂಖ್ಯೆ 115, 1ನೇ ಮಹಡಿ, ಸುವರ್ಣಭವನ, 18ನೇ ಅಡ್ಡರಸ್ತೆ, ಮಾರ್ಗೋಸ ರಸ್ತೆ, ಮಲ್ಲೇಶ್ವರಂ, ಬೆಂಗಳೂರು. ಸೇವಾಠಾಣೆಗಳು ಮಲ್ಲೇಶ್ವರಂ–1&2, ಶ್ರೀರಾಮಪುರ, ಯಶವಂತಪುರ–1&2, ಭಾಷ್ಯಂಪಾರ್ಕ್ ದೂರವಾಣಿ ಸಂಖ್ಯೆ 9972438647, ಉಪವಿಭಾಗ (ಉತ್ತರ ವಿಲೇಜ್ –1) 1ನೇ ಮಹಡಿ, 7ನೇ ಮುಖ್ಯ ರಸ್ತೆ, ಎಂ.ಇ.ಐ ಲೇಔಟ್, ಹೆಸರಘಟ್ಟ ರಸ್ತೆ, ಬೆಂಗಳೂರು–73 ಸೇವಾಠಾಣೆಗಳು ಶೆಟ್ಟಿಹಳ್ಳಿ, ಅಬ್ಬಿಗೆರೆ, ಚಿಕ್ಕಸಂದ್ರ, ಸಿಡೇದಹಳ್ಳಿ, ದೊಡ್ಡಬಿದರಕಲ್ಲು ದೂರವಾಣಿ ಸಂಖ್ಯೆ 9845444068 ನ್ನು ಸಂಪರ್ಕಿಸುವುದು.

ಕುಂದು ಕೊರತೆಗಳಿಗೆ ಸಂಬಂಧಿಸಿದಂತೆ ಮಂಡಲಿಯ 24/7 ದೂರು ನಿರ್ವಹಣಾ ಕೇಂದ್ರದ ಸಹಾಯವಾಣಿ 1916 ಹಾಗೂ ವಾಟ್ಸ್‌ಆಪ್ ಸಂಖ್ಯೆ:8762228888 ಗೆ ಸಂಪರ್ಕಿಸಬಹುದಾಗಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

**ಬೆಂಗಳೂರು ನಗರದಲ್ಲಿ ಸ್ಥಾಪಿಸಿರುವ ವಾಯು ಗುಣಮಟ್ಟ ಮಾಪನ ಕೇಂದ್ರಗಳ ವಾಯು ಗುಣಮಟ್ಟ ಸೂಚ್ಯಂಕ**

ಬೆಂಗಳೂರು, ಆಗಸ್ಟ್ 10 (ಕರ್ನಾಟಕ ವಾರ್ತೆ):

**ವಾಯುಗುಣಮಟ್ಟ ಸೂಚ್ಯಂಕ (AQI), ಬೆಂಗಳೂರು**

**ದಿನಾಂಕ: 10.8.2021 (Average of past 24 hours)**

| ಕ್ರಮ ಸಂಖ್ಯೆ | ಮಾಪನ ಕೇಂದ್ರಗಳ ಹೆಸರು | ವಾಯುಗುಣಮಟ್ಟ ಸೂಚ್ಯಂಕ (AQI) | ವರ್ಗ | ಪ್ರಮುಖ ಮಾಲಿನ್ಯಕಾರಕ |
|---|---|---|---|---|
| 1 | ಪಶುವೈದ್ಯಕೀಯಕಾಲೇಜು, ಹೆಬ್ಬಾಳ | 31 | ಉತ್ತಮ | $PM_{10}$ |
| 2 | ಜಯನಗರ 5ನೇ ಬ್ಲಾಕ್, ಶಾಲಿನಿ ಮೈದಾನ | 38 | ಉತ್ತಮ | Ozone |
| 3 | ಕವಿಕ, ಮೈಸೂರುರಸ್ತೆ | * | * | * |
| 4 | ರಾಜೀವ್‌ಗಾಂಧಿಎದೆರೋಗಗಳ ಸಂಸ್ಥೆ, ನಿಮ್ಹಾನ್ಸ್ ಹೊಂಬೆಗೌಡನಗರ | 30 | ಉತ್ತಮ | $PM_{10}$ |
| 5 | ಹೆಚ್.ಎಸ್.ಆರ್ ಲೇಔಟ್, ಕೇಂದ್ರರೇಷ್ಮೆ ಮಂಡಳಿ ಹತ್ತಿರ | 69 | ತೃಪ್ತಿಕರ | $PM_{10}$ |
| 6 | ನಗರರೈಲ್ವೆ ನಿಲ್ದಾಣ, ಮೆಜೆಸ್ಟಿಕ್, ಬೆಂಗಳೂರು | 63 | ತೃಪ್ತಿಕರ | $PM_{10}$, |
| 7 | ಸಾಣೆಗುರುವನಹಳ್ಳಿ, ನಿಸರ್ಗ ಭವನ, ಕರ್ನಾಟಕರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ಶಿವನಗರ | 44 | ಉತ್ತಮ | $PM_{10}$ |
| **(10.8.2021 at 10.05 AM)** | | | | |
| 8 | BWSSB,ಕಾಡಬೀಸನಹಳ್ಳಿ | 45 | ಉತ್ತಮ | $PM_{10}$ |
| 9 | ಪೀಣ್ಯ | * | * | * |
| 10 | ಬಿಟಿಎಂ ಲೇಔಟ್ | 53 | ತೃಪ್ತಿಕರ | CO |

| ವರ್ಗ(ಶ್ರೇಣಿ) | ಉಂಟಾಗಬಹುದಾದಆರೋಗ್ಯ ಪರಿಣಾಮಗಳು |
|---|---|
| ಉತ್ತಮ (0–50) | ಕನಿಷ್ಠ ಪರಿಣಾಮ |
| ತೃಪ್ತಿಕರ (51–100) | ಸೂಕ್ಷ್ಮ ಜನರಿಗೆ ಸಣ್ಣ ಉಸಿರಾಟದ ಅಸ್ವಸ್ಥತೆ |
| ಸಾಧಾರಣ (101–200) | ಶ್ವಾಸಕೋಶ, ಹೃದಯಕಾಯಿಲೆಯವರು, ಮಕ್ಕಳು ಮತ್ತು ಹಿರಿಯ ವಯಸ್ಕರಿಗೆ ಉಸಿರಾಟದ ಅಸ್ವಸ್ಥತೆ |
| ಕಳಪೆ (201–300) | ದೀರ್ಘಕಾಲಿಕಒಡ್ಡುವಿಕೆಯಿಂದಜನರಿಗೆ ಉಸಿರಾಟದ ಅಸ್ವಸ್ಥತೆ |
| ಅತಿ ಕಳಪೆ (301–400) | ದೀರ್ಘಕಾಲಿಕಒಡ್ಡುವಿಕೆಯಿಂದಜನರಿಗೆ ಶ್ವಾಸಕೋಶದಅಸ್ವಸ್ಥತೆ |
| ತೀವ್ರ (>401) | ಆರೋಗ್ಯವಂತಜನರಿಗೂ ಉಸಿರಾಟದ ಅಸ್ವಸ್ಥತೆ |

## AQI of the CAAQM stations established in Bengaluru City

**Date : 10.8.2021 (Average of past 24 hours)**

| Sl. No. | Station | AQI | Category | Prominent Pollutant |
|---|---|---|---|---|
| 1 | Veterinary College Hebbal | 31 | Good | $PM_{10}$ |
| 2 | Jayanagar 5th Block, Shalini ground | 38 | Good | Ozone |
| 3 | KAVIKA, Mysore Road | * | * | * |
| 4 | Rajeev Gandhi Institute of Chest Disease, NIMHANS, Hombegowda Nagar | 30 | Good | $PM_{10}$ |
| 5 | HSR Layout, near Central Silkboard | 69 | Satisfactory | $PM_{10}$ |
| 6 | City Railway Station, Magestic, Bengaluru | 63 | Satisfactory | $PM_{10,}$ |
| 7 | Saneguruvanahalli, NisargaBhavan, KSPCB, Shivanagara | 44 | Good | $PM_{10}$ |
| **(10.8.2021 at 10.05 AM)** | | | | |
| 8 | BWSSB, Kadabesanahalli | 45 | Good | $PM_{10}$ |
| 9 | Peenya | * | * | * |
| 10 | BTM Layout | 53 | Satisfactory | CO |

* Data not available

| Category (Range) | Possible Health Impacts | Category (Range) | Possible Health Impacts |
|---|---|---|---|
| Good (0–50) | Minimal Impact | Poor (201–300) | Breathing discomfort to people on prolonged exposure |
| Satisfactory (51–100) | Minor breathing discomfort to sensitive people | Very Poor (301–400) | Respiratory illness to the people on prolonged exposure |
| Moderate (101–200) | Breathing discomfort to the people with lung, Heart disease, children and older | Severe (>401) | Respiratory effects even on healthy people |